ಕನ್ನಡಪ್ರಭ
ಮಂಗಳವಾರ 5.05.2026

ಗರಿಷ್ಠ 38°C | ಕನಿಷ್ಠ 24°C

ಸುದ್ದಿ ಸಿಂಚನ

ಗಂಗಾವತಿ: ಖಾಸಗಿ ಲಾಡ್ಜ್‌ನಲ್ಲಿ ಜೂಜಾಟ, 13 ಜನರ ಬಂಧನ

ಗಂಗಾವತಿ: ನಗರದ ಕೊಪ್ಪಳ ರಸ್ತೆಯ ಮಾರ್ಗದಲ್ಲಿರುವ ಪ್ರತಿಷ್ಠಿತ ಲಾಡ್ಜ್‌ನಲ್ಲಿ ಇಸ್ಪೀಟ್ ಆಟದಲ್ಲಿ ತೊಡಗಿದ್ದ 13 ಜನರನ್ನು ಪೊಲೀಸರು ಬಂಧಿಸಿದ್ದಾರೆ. ಬಿಸಿಲಿನ ಧಗೆ ಇದೆ ಎಂಬ ಕಾರಣಕ್ಕೆ ಜೂಜುಕೋರರು ಪ್ರಮುಖ ಹೋಟೆಲ್‌ಗಳನ್ನು ಅಡ್ಡಿಯಾಗಿ ಮಾಡಿಕೊಂಡು ಇಸ್ಪೀಟ್ ಆಟ ಆಡುತ್ತಿರುವ ಬಗ್ಗೆ ಮಾಹಿತಿ ಪಡೆದ ಡಿವೈಎಸ್ಪಿ ಜಾಯಪ್ಪ ನ್ಯಾಮಗೊಡರ್‌ಅವರು ತಮ್ಮ ತಂಡದೊಂದಿಗೆ ದಾಳಿ ನಡೆಸಿ, 13 ಜನರನ್ನು ಬಂಧಿಸಿ, ಅವರಲ್ಲಿದ್ದ ₹54 ಸಾವಿರ ಹಾಗೂ ಜೂಜಾಟಕ್ಕೆ ಸಂಬಂಧಿಸಿದಂತೆ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಹಿಂದೆ ಗ್ರಾಮೀಣ ಪ್ರದೇಶ ಮತ್ತು ಗುಡ್ಡ, ಗದ್ದೆಗಳಲ್ಲಿ ಜೂಜಾಟ ದಂಧೆ ನಡೆಸುತ್ತಿದ್ದರು. ಈಗ ಬಿಸಿಲಿನ ಧಗೆ ಹೆಚ್ಚಾಗಿದ್ದರಿಂದ ಗಂಗಾವತಿ ನಗರದ ಪ್ರತಿಷ್ಠಿತ ಲಾಡ್ಜ್, ಸಣ್ಣ ಪುಟ್ಟ ಲಾಡ್ಜ್‌ಗಳಲ್ಲಿ ಇಸ್ಪೀಟ್ ದಂಧೆ ನಡೆದಿರುವ ಬಗ್ಗೆ ಮಾಹಿತಿ ಪಡೆದು ಪೊಲೀಸರು ದಾಳಿ ನಡೆಸಿದ್ದಾರೆ. ಹೊರ ರಾಜ್ಯಗಳಿಂದ ಬರುವ ಜೂಜುಕೋರರು ಲಕ್ಷಾಂತರ ರುಪಾಯಿಗಳನ್ನು ತಂದು ಇಸ್ಪೀಟ್ ಆಟದಲ್ಲಿ ತೊಡಗುತ್ತಿದ್ದಾರೆ. ಇತ್ತೀಚಿಗೆ ನಗರದಲ್ಲಿ ಅಹಿತಕರ ಘಟನೆಯಿಂದಾಗಿ ಜನರು ಬೆಚ್ಚಿಬಿದ್ದಿದ್ದು, ಈಗ ಜೂಜುಕೋರರ ಹಾವಳಿಯಿಂದ ಯುವಕರು ಸಹ ತಪ್ಪು ದಾರಿಗೆ ಹೋಗುತ್ತಿದ್ದಾರೆ ಎಂದು ಪೊಲೀಸರು ಈ ಹಿಂದೆ ಜಾಗೃತಿ ಸಭೆ ನಡೆಸಿ ಎಚ್ಚರಿಕೆ ನೀಡಿದ್ದರು.

ದಾಳಿ ನಡೆಸುತ್ತಿದ್ದಂತಯೆ ಕೆಲವರು ಪರಾರಿ: ಲಾಡ್ಜ್‌ನಲ್ಲಿ ಇಸ್ಪೀಟ್ ಆಟ ನಡೆಯುತ್ತಿರುವ ಬಗ್ಗೆ ಸುಳಿವು ಪಡೆದುಕೊಂಡ ಪೊಲೀಸರು ಲಾಡ್ಜ್ ಲಿಫ್ಟ್ ಏರುತ್ತಿದ್ದಂತೆಯೇ ಕೆಲವರು ಪರಾರಿಯಾಗಿದ್ದಾರೆ. 13 ಜನರು ಸಿಕ್ಕಿ ಹಾಕಿಕೊಂಡಿದ್ದಾರೆ. ದಾಳಿಯಲ್ಲಿ ಮುತ್ತಣ್ಣ, ಗ್ಯಾನಪ್ಪ ಮತ್ತು ವಿಶ್ವನಾಥ ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

ಪತ್ನಿಗೆ ಕಾಯಿಲೆ, ನೊಂದು ಯುವಕ ಆತ್ಮಹತ್ಯೆ

ಗಂಗಾವತಿ: ಪತ್ನಿಯ ಕಾಯಿಲೆಯ ಚಿಕಿತ್ಸೆಗೆ ಹಣದ ಕೊರತೆಯಾಗಿದ್ದರಿಂದ ನೊಂದು ಯುವಕ ಆತ್ಮಹತ್ಯೆ ಮಾಡಿಕೊಂಡ ಘಟನೆ ಸಮೀಪದ ದೇವಘಾಟ್ ಬಳಿ ನಡೆದಿದೆ. ತಾಲೂಕಿನ ಮಲ್ಲಾಪುರ ಗ್ರಾಮದ ಹುಲಗೇಶ ಶಿವಪ್ಪ (25) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿ. ಈತನ ಪತ್ನಿ ಮೆದುಳು ಕಾಯಿಲೆಯಿಂದ ಬಳಲುತ್ತಿದ್ದಳು. ವಿವಿಧ ಆಸ್ಪತ್ರೆಗಳಲ್ಲಿ ಸಾಕಷ್ಟು ಹಣ ಖರ್ಚು ಮಾಡಿ ಚಿಕಿತ್ಸೆ ಕೊಡಿಸಿದ್ದಾರೆ. ಇನ್ನು ಹೆಚ್ಚಿನ ಚಿಕಿತ್ಸೆ ಹಣ ಬೇಕಾಗಿದ್ದರಿಂದ ನೊಂದು ದೇವಘಾಟ್ ಬಳಿಯ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣನಾಗಿದ್ದಾನೆ. ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಐಪಿಎಲ್ ಬೆಟ್ಟಿಂಗ್, ಓರ್ವನ ಬಂಧನ

ಕೊಪ್ಪಳ: ಜಿಲ್ಲೆಯಲ್ಲಿ ಐಪಿಎಲ್ ಬೆಟ್ಟಿಂಗ್ ಅವ್ಯಾಹತವಾಗಿ ನಡೆಯುತ್ತಿದೆ ಎನ್ನುವ ಆರೋಪ ಬಲವಾಗಿ ಕೇಳಿಬರುತ್ತಿದೆ. ಅದರಲ್ಲೂ ಶಾಲಾ, ಕಾಲೇಜು ವಿದ್ಯಾರ್ಥಿಗಳೇ ಐಪಿಎಲ್ ಬೆಟ್ಟಿಂಗ್‌ನಲ್ಲಿ ಭಾಗಿಯಾಗಿದ್ದಾರೆ ಎನ್ನುವ ಆರೋಪ ಕೇಳಿಬರುತ್ತಿದೆ. ಈ ನಡುವೆ ಐಪಿಎಲ್ ಬೆಟ್ಟಿಂಗ್‌ನಲ್ಲಿ ಭಾಗಿಯಾಗಿರುವ ಓರ್ವನನ್ನು ಬಂಧಿಸಲಾಗಿದೆ. ಕೊಪ್ಪಳ ತಾಲೂಕಿನ ಮಹ್ಮದ್ ನಗರದ ನಿವಾಸಿ ಅಲ್ಲಾಭಕ್ಷಿ ಎನ್ನುವ ನಿವಾಸಿಯನ್ನು ಬಂಧಿಲಾಗಿದ್ದು, ಓರ್ವ ಪರಾರಿಯಾಗಿದ್ದಾನೆ. ಖಚಿತ ಮಾಹಿತಿಯನ್ನಾಧರಿಸಿ ಮಹ್ಮದ ನಗರದಲ್ಲಿ ದಾಳಿ ಮಾಡಿದಾಗ ಆರೋಪಿ ಸಿಕ್ಕಿಬಿದ್ದಿದ್ದಾನೆ. ಬಂಧಿನಿಂದ ₹6500 ವಶಪಡಿಸಿಕೊಂಡಿದ್ದಾರೆ. ಆರೋಪಿಗಳು ಪಂಜಾಬ್ ಕಿಂಗ್ಸ್ ಮತ್ತು ಗುಜರಾತ ಟೈಟಾನ್ಸ್ ನಡುವಿನ ಪಂದ್ಯದಲ್ಲಿ ಬೆಟ್ಟಿಂಗ್ ಆಡುತ್ತಿರುವ ವೇಳೆಯಲ್ಲಿ ಸಿಕ್ಕಿಬಿದ್ದಿದ್ದಾರೆ. ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಬಾಕಿ ವೇತನ ನೀಡುವಂತೆ ಒತ್ತಾಯಿಸಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ವತಿಯಿಂದ ಗಂಗಾವತಿ ವಡ್ಡರಹಟ್ಟಿ ನೀರಾವರಿ ಇಲಾಖೆಯ ಕಚೇರಿ ಮುಂದೆ ಸೋಮವಾರ ಧರಣಿ ನಡೆಸಲಾಯಿತು.



ಕುಕನೂರು ಪಟ್ಟಣದಲ್ಲಿ ಬಸವೇಶ್ವರ ಮೂರ್ತಿ ಪ್ರತಿಷ್ಠಾಪನೆಯ ಭೂಮಿಪೂಜೆ ಕಾರ್ಯ ಜರುಗಿತು. ಮುಂಡರಗಿ ಡಾ. ಅನ್ನದಾನೀಶ್ವರ ಶ್ರೀ, ಅಭಿನವ ಗವಿಸಿದ್ದೇಶ್ವರ ಶ್ರೀಗಳು, ಸಚಿವ ಶಿವಾನಂದ ಪಾಟೀಲ್ ಹಾಗೂ ಜಿಲ್ಲೆಯ ಪ್ರಮುಖ ನಾಯಕರು ಇದ್ದರು.

ರಾಯರಡ್ಡಿ ಸಿಎಂ ಆಗಲಿ: ಶಿವಾನಂದ ಪಾಟೀಲ್

• **ಕನ್ನಡಪ್ರಭ ವಾರ್ತೆ** ಕುಕನೂರು

ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಸದಾ ಅಭಿವೃದ್ಧಿ ಕಾರ್ಯ ಚಿಂತಕ. ಅಭಿವೃದ್ಧಿಗಳ ಪೈಲ್ವಾನ್ ಅವರು. ಅವರು ಹೇಳಿದರೆ ಮುಖ್ಯಮಂತ್ರಿ ಎಂತಹ ಕಾರ್ಯ ಸಹ ಮಾಡುತ್ತಾರೆ. ನನಗೆ ಅವರು ಇನ್ನೊಂದು ಖಾತೆ ಕೊಡಿಸ್ತೀನಿ ಅಂದ್ರು, ಅಷ್ಟು ಪವರ್‌ಅವರಿಗೆ ಇದೆ. ರಾಯರಡ್ಡಿ ಅವರ ಅಭಿವೃದ್ಧಿ ಚಿಂತನೆ ನೋಡಿದರೆ ಅವರು ಸಹ ಮುಖ್ಯಮಂತ್ರಿ ಆಗಬೇಕು ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು. ಪಟ್ಟಣದ ಕೋಲ್ಡ್ ಸ್ಟೋರೇಜ್, ಗಣ್ಯರ ಮೂರ್ತಿ ಪ್ರತಿಷ್ಠಾಪನಾ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ರಾಯರಡ್ಡಿ ಅವರು ಬರೀ ಮಂತ್ರಿ ಆಗುವುದು ಮಾತ್ರವಲ್ಲ, ಮುಖ್ಯಮಂತ್ರಿ ಆಗಲಿ. ಆಡು ಮುಟ್ಟದ ಸೊಪ್ಪಿಲ್ಲ, ರಾಯರಡ್ಡಿ ಮಾಡದೆ ಇರುವ ಅಭಿವೃದ್ಧಿ ಕೆಲಸಗಳಿಲ್ಲ. ಮೊದಲ ಬಾರಿಗೆ ಅವರು ಹಾಗೂ ನಾನು ಧ್ವನಿ ಎತ್ತಿ ವಿಜಯಪುರದಿಂದ ಬೆಂಗಳೂರಿಗೆ ಹೈವೇ ಮಾಡಿಸಿದೆವು. ಇದರಿಂದ ಅಪಘಾತ ಪ್ರಮಾಣ ತಗ್ಗಿತು. ರಾಯರಡ್ಡಿ ಅವರು ರೈಲ್ವೆ, ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣಕ್ಕೆ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಧ್ವನಿ ಎತ್ತಿದವರು. ಅವರಿಗೂ ಶುಕ್ರದೆಶೆ ಬರಲಿ ಎಂದರು.

ಬಡ ವಿದ್ಯಾರ್ಥಿನಿಯರ ಶೈಕ್ಷಣಿಕ ಕಲ್ಯಾಣಕ್ಕಾಗಿ ದತ್ತು ಯೋಜನೆ

ವಾರ್ಷಿಕ ವೆಚ್ಚ ಭರಿಸುವ ಮೂಲಕ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಬಹುದು | ಗವಿಮಠ ಆರಂಭಿಸಿರುವ ಗುರುಕುಲದಲ್ಲಿ 600 ವಿದ್ಯಾರ್ಥಿನಿಯರಿಗೆ ಉಚಿತ ವಸತಿ, ಶಿಕ್ಷಣ ವ್ಯವಸ್ಥೆ



ಗವಿಮಠದ ವಿದ್ಯಾರ್ಥಿನಿಯರ ಗುರುಕುಲ ಉದ್ಘಾಟನೆ ವೇಳೆ ಗಣ್ಯರು ಭಾಗಿಯಾಗಿದ್ದರು.

• **ಸೋಮರಡ್ಡಿ ಅಳವಂಡಿ**
ಕನ್ನಡಪ್ರಭ ವಾರ್ತೆ ಕೊಪ್ಪಳ

ಗುಡಿಸಲಿನ ಮಕ್ಕಳ ಎದೆಯಲ್ಲಿ ಅಕ್ಷರ ದೀಪ ಹಚ್ಚುವ ಸದುದ್ದೇಶದಿಂದ ಗವಿಮಠದಿಂದ ಸ್ಥಾಪಿಸಲಾಗಿರುವ ಗುರುಕುಲದಲ್ಲಿ ಓದುವ ವಿದ್ಯಾರ್ಥಿನಿಯರನ್ನು ದತ್ತು ಪಡೆಯುವ ಯೋಜನೆಯನ್ನು ಗವಿಮಠ ರೂಪಿಸಿದ್ದು, ಈ ಮೂಲಕ ಬಡ ವಿದ್ಯಾರ್ಥಿನಿಯರ ಶೈಕ್ಷಣಿಕ ಕಲ್ಯಾಣ ಕಾರ್ಯಕ್ಕೆ ಕೈಜೋಡಿವಂತೆ ಸಾರ್ವಜನಿಕರಲ್ಲಿ ಕೋರಲಾಗಿದೆ.

ತಾಲೂಕಿನ ಕೋಳೂರು ಚ ಕಾಟ್ರಳ್ಳಿ ಗ್ರಾಮದ ಮಧ್ಯ 48 ಎಕರೆ ವಿಸ್ತಾರವಾದ ಕ್ಯಾಂಪಸ್‌ನಲ್ಲಿ ತಲೆ ಎತ್ತಿರುವ ಗುರುಕುಲದಲ್ಲಿ ಪ್ರಸಕ್ತ ವರ್ಷ 600 ವಿದ್ಯಾರ್ಥಿನಿಯರಿಗೆ ಪಿಯುಸಿ ಓದಲು ಅವಕಾಶ ನೀಡಲಾಗುತ್ತದೆ. ವಸತಿ, ಕಾಲೇಜು ಶಿಕ್ಷಣದ ಜತೆಗೆ ಸಿಇಟಿ, ನೀಟ್ ಹಾಗೂ ವೃತ್ತಿ ತರಬೇತಿ ಕೋರ್ಸ್‌ಗಳನ್ನು ನೀಡಲಾಗುತ್ತದೆ. ಇದೆಲ್ಲವೂ ಉಚಿತವಾಗಿ ನಡೆಸುವ ಮೂಲಕ ಗವಿಮಠ ಹೊಸ ಕ್ರಾಂತಿಗೆ ಮುಂದಾಗಿದೆ.

ಇಂಥ ಮಹತ್ವದ ಕಾರ್ಯದಲ್ಲಿ ಸದ್ಭಕ್ತರು ಭಾಗಿಯಾಗುವುದಕ್ಕೆ ಅವಕಾಶ ಕಲ್ಪಿಸಲಾಗಿದೆ. ಇದಕ್ಕಾಗಿ ವಿದ್ಯಾರ್ಥಿನಿಯರ ದತ್ತು ಯೋಜನೆಯನ್ನು ರೂಪಿಸಿದ್ದು, ವಿದ್ಯಾರ್ಥಿನಿಯರ ವಾರ್ಷಿಕ ವೆಚ್ಚ ನಿಭಾಯಿಸುವ ಮೂಲಕ ನೆರವಾಗಬಹುದಾಗಿದೆ.

ಓರ್ವ ವಿದ್ಯಾರ್ಥಿನಿಯ ಊಟದ ಖರ್ಚು ಪ್ರತಿ ತಿಂಗಳು ₹3 ಸಾವಿರದಂತೆ ₹36 ಸಾವಿರ ಪಾವತಿ ಮಾಡಿ ಊಟದ ವೆಚ್ಚದ ದತ್ತು ಪಡೆಯಬಹುದು. ಶೈಕ್ಷಣಿಕ ಖರ್ಚು, ಊಟದ ವೆಚ್ಚವನ್ನು ಒಳಗೊಂಡು ಪ್ರತಿ ತಿಂಗಳಿಗೆ ₹6 ಸಾವಿರದಂತೆ ₹72 ಸಾವಿರ ಪಾವತಿಸುವ ಮೂಲಕ ಒಂದು ವರ್ಷದ ಎಲ್ಲ ವೆಚ್ಚವನ್ನು ಭರಿಸುವ ಮೂಲಕವೂ ಮಗುವೊಂದನ್ನು ದತ್ತು ಪಡೆಯಬಹುದು.

ದತ್ತು ಪಡೆಯುವವರು ಯಾವುದಾದರೂ ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶವಿದ್ದು, ಐದು, ಹತ್ತು ಅಥವಾ ನೂರು ವಿದ್ಯಾರ್ಥಿಗಳನ್ನು ದತ್ತು ಪಡೆಯಬಹುದಾಗಿದೆ. ಗುರುಕುಲದಲ್ಲಿ ಓದುವ ಎಲ್ಲ ವಿದ್ಯಾರ್ಥಿನಿಯರ ವಸತಿ ಮತ್ತು ಶೈಕ್ಷಣಿಕ ವೆಚ್ಚದ ಹೊರೆಯನ್ನು ಗವಿಮಠ ನಿಭಾಯಿಸುತ್ತದೆ. ಊಟದ ವೆಚ್ಚವನ್ನು ವಿದ್ಯಾರ್ಥಿಗಳು ಭರಿಸಬೇಕು. ಆದರೆ, ಈ ದತ್ತು ಯೋಜನೆಯ ಮೂಲಕ ಮಹಾನ್ ಕಾರ್ಯದಲ್ಲಿ ಭಾಗವಹಿಸುವುದಕ್ಕೆ ಅವಕಾಶ ನೀಡಲಾಗಿದೆ.

ದತ್ತು ಪಡೆಯಲು ಇಚ್ಛಿಸುವವರು 9980899219, 7892839195 ಸಂಖ್ಯೆಗೆ ಅಥವಾ gavimathgurukul@gmail.com, www.ssmetgavimat hkoppal.orgಗೆ ಸಂಪರ್ಕ ಮಾಡಬಹುದು.

ಸತ್ಕಾರಕ್ಕೆ ಕೈಜೋಡಿಸಿ

ಬಡ ವಿದ್ಯಾರ್ಥಿನಿಯರ ಬದುಕಿನಲ್ಲಿ ಬೆಳಕು ಮೂಡಿಸುವ ಸತ್ಕಾರ್ಯದಲ್ಲಿ ಕೈಕೋಡಿಸುವಂತೆ ಗವಿಮಠ ವಿನಂತಿಸಿದೆ. ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಶ್ರೀ ಮಠವು ವಿದ್ಯಾರ್ಥಿನಿಯರ ಪಿಯು ಶಿಕ್ಷಣವನ್ನು ವಸತಿ ಕಾಲೇಜು ಮೂಲಕ ಹಾಗೂ ಹಲವಾರು ವೃತ್ತಿ ತರಬೇತಿ ಕೋರ್ಸ್‌ಗಳನ್ನು ನೀಡುವ ಮಹಾನ್ ಕಾರ್ಯಕ್ಕೆ ಕೈಹಾಕಿದೆ. ಇದೆಲ್ಲಕ್ಕೂ ಭಕ್ತರ ಸಹಕಾರ ಮುಖ್ಯ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಬಾಕಿ ವೇತನ: ನೀರಾವರಿ ಇಲಾಖೆಯ ಕಾರ್ಮಿಕರ ಧರಣಿ

ನಾಲ್ಕು ತಿಂಗಳ ಬಾಕಿ ವೇತನ ನೀಡದ ಅಭಿಯಂತರರ ವಿರುದ್ಧ ಕಾರ್ಮಿಕರ ಆಕ್ರೋಶ

• **ಕನ್ನಡಪ್ರಭ ವಾರ್ತೆ** ಗಂಗಾವತಿ

ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಬಾಕಿ ವೇತನ ನೀಡುವಂತೆ ಒತ್ತಾಯಿಸಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ವತಿಯಿಂದ ವಡ್ಡರಹಟ್ಟಿ ನೀರಾವರಿ ಇಲಾಖೆಯ ಕಚೇರಿ ಮುಂದೆ ಸೋಮವಾರ ಧರಣಿ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಕೇಂದ್ರ ಸಮಿತಿ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ, ತುಂಗಭದ್ರಾ ನೀರಾವರಿ ಯೋಜನೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಜನವರಿ, ಫೆಬ್ರವರಿ, ಮಾರ್ಚ್ ಹಾಗೂ ಏಪ್ರಿಲ್ ತಿಂಗಳ ವೇತನ ಪಾವತಿಸದೇ ನಿರ್ಲಕ್ಷ್ಯ ವಹಿಸಲಾಗಿದೆ. ಸಂಧಾನ ಸಭೆಗಳಲ್ಲಿ ಹಾಗೂ ಕಾರ್ಮಿಕ ಇಲಾಖೆಯ ಮುಂದಾಳತ್ವದಲ್ಲಿ ತೆಗೆದುಕೊಳ್ಳಲಾದ ನಿರ್ಧಾರಗಳನ್ನೂ ಜಾರಿಗೊಳಿಸದೇ ಇರುವುದರಿಂದ ಕಾರ್ಮಿಕರು ತೀವ್ರ ಆರ್ಥಿಕ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದರು. ಕಾರ್ಮಿಕರಿಗೆ ಉದ್ಯೋಗ ಭದ್ರತೆ, ಕನಿಷ್ಠ ವೇತನ, ಇಎಸ್‌ಐ, ಪಿಎಫ್ ಸೇರಿದಂತೆ ಕಾನೂನುಬದ್ಧ ಸೌಲಭ್ಯಗಳನ್ನು ನೀಡಬೇಕಾದ ಸರ್ಕಾರದ ಸಂಸ್ಥೆಯೆ ಕಾರ್ಮಿಕ ಕಾಯ್ದೆಗಳನ್ನು ಉಲ್ಲಂಘಿಸುತ್ತಿರುವುದು ಖಂಡನೀಯ. ಟೆಂಡರ್‌ಪ್ರಕ್ರಿಯೆಯ ವಿಳಂಬದ ಹೆಸರಿನಲ್ಲಿ ಕಾರ್ಮಿಕರನ್ನು ಕೆಲಸದಿಂದ ದೂರ ಇಡುವುದು ಹಾಗೂ ಗುತ್ತಿಗೆದಾರರ ಮೂಲಕ ಕೆಲಸ ಮಾಡಿಸುವುದು ಕಾರ್ಮಿಕ ವಿರೋಧಿ ಕ್ರಮವಾಗಿದೆ ಎಂದು ದೂರಿದರು.

ಸಂಘದ ಪ್ರಮುಖ ಬೇಡಿಕೆಗಳಾದ ಬಾಕಿ ಇರುವ ಎಲ್ಲ ವೇತನವನ್ನು ತಕ್ಷಣ ಪಾವತಿಸಬೇಕು, ಕಾರ್ಮಿಕ ನ್ಯಾಯಾಲಯ ಮತ್ತು ಸರ್ಕಾರದ ನಿರ್ದೇಶನಗಳನ್ನು ಜಾರಿಗೊಳಿಸಬೇಕು, ಕಾರ್ಮಿಕ ಕಾಯ್ದೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ವೇತನ ವ್ಯತ್ಯಾಸದ ಮೊತ್ತವನ್ನು ಕಾರ್ಮಿಕರ ಖಾತೆಗೆ ಜಮಾ ಮಾಡಬೇಕು, ಕಾರ್ಮಿಕರಿಗೆ ನಿರಂತರ ಕೆಲಸ ಹಾಗೂ ಉದ್ಯೋಗ ಭದ್ರತೆ ನೀಡಬೇಕು, ಈ ಎಲ್ಲ ಬೇಡಿಕೆಗಳನ್ನು ತಕ್ಷಣ ಈಡೇರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.

ಧರಣಿ ನೇತೃತ್ವವನ್ನು ವಡ್ಡರಹಟ್ಟಿ ಉಪ ವಿಭಾಗದ ಅಧ್ಯಕ್ಷ ಶರಣಬಸವ ಹೇರೂರು, ಕಾರಟಗಿ ಉಪ ವಿಭಾಗದ ಅಧ್ಯಕ್ಷ ಹುಚ್ಚಯ್ಯ ಸ್ವಾಮಿ, ಎಐಸಿಸಿಟಿಯು ಜಿಲ್ಲಾಧ್ಯಕ್ಷ ವಿಜಯ್ ದೊರೆರಾಜು, ಲಕ್ಷ್ಮಣ ಸಿಂಗನಾಳ, ಚಾಂದ್ ಪಾಷಾ, ಶಿವಕುಮಾರ ತಿಪ್ಪನಾಳ, ಸೈಯದ್ ಸಾಬ್, ಗುಂಡಪ್ಪ, ವೀರಯ್ಯ ಸ್ವಾಮಿ, ಶೇಖರ್ ಕಾರಟಗಿ, ಹನುಮಂತಪ್ಪ ಹೂಗಾರ್, ಯಮನಪ್ಪ ಕುಂಟೋಜಿ, ಶರಣಪ್ಪ ಹಣವಾಳ ಕ್ಯಾಂಪ್, ಖಾಜಾ ಸಾಬ್, ಲಕ್ಷ್ಮೀ, ಲಕ್ಷ್ಮಮ್ಮ, ನಾಗಮ್ಮ, ಮೆಹಬೂಬ್ ಸಾಬ್, ನಬಿಸಾಬ್, ವೆಂಕಟೇಶ್ ಹಾಗೂ ವಡ್ಡರಹಟ್ಟಿ ಮತ್ತು ಕಾರಟಗಿ ಉಪ ವಿಭಾಗದ ಕಾರ್ಮಿಕರು ಪಾಲ್ಗೊಂಡಿದ್ದರು.

- ಬಾಕಿ ಇರುವ ಎಲ್ಲ ವೇತನವನ್ನು ತಕ್ಷಣ ಪಾವತಿಸಬೇಕು
- ಕಾರ್ಮಿಕ ನ್ಯಾಯಾಲಯ ಮತ್ತು ಸರ್ಕಾರದ ನಿರ್ದೇಶನಗಳನ್ನು ಜಾರಿಗೊಳಿಸಬೇಕು

ಕನಕಗಿರಿ ಉತ್ಸವದ ಸಿದ್ಧತೆ ಅಚ್ಚುಕಟ್ಟಾಗಿರಲಿ

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ನಿರ್ದೇಶನ



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಯಿತು.

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಜಿಲ್ಲೆಯ ಐತಿಹಾಸಿಕ ಪುಣ್ಯ ಕ್ಷೇತ್ರವಾದ ಕನಕಗಿರಿಯಲ್ಲಿ ಮೇ 16ರಿಂದ ಎರಡು ದಿನಗಳ ಕಾಲ ನಿಗದಿಯಾದ ಕನಕಗಿರಿ ಉತ್ಸವ-2026 ವಿವಿಧ ಸಮಿತಿಗಳಲ್ಲಿನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ನಿರ್ದೇಶನ ನೀಡಿದರು.

ಕನಕಗಿರಿ ಉತ್ಸವ-2026ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಮತ್ತೊಂದು ಸುತ್ತಿನ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉತ್ಸವಕ್ಕೆ ಬೆರಳೆಣಿಕೆಯಷ್ಟು ದಿನಗಳು ಮಾತ್ರ ಬಾಕಿಯಿದೆ. ಎಲ್ಲ ಸಮಿತಿಗಳು ತಮ್ಮ ಕಾರ್ಯ ಕಾಲಮಿತಿಯೊಳಗೆ ಪೂರ್ಣಗೊಳಿಸಲು ವಿಶೇಷ ಒತ್ತು ಕೊಡಬೇಕು. ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

ಉತ್ಸವ ಸಂದರ್ಭದಲ್ಲಿ ಕನಕಗಿರಿಯಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಬೇಕು. ಮೆರವಣಿಗೆ ಮಾರ್ಗ ಸೇರಿದಂತೆ ಎಲ್ಲ ಕಡೆಗೆ ವಿದ್ಯುದೀಪಾಲಂಕಾರಕ್ಕೆ ವ್ಯವಸ್ಥೆಯಾಗ ಬೇಕು. ಉತ್ಸವದ ಅಂಗವಾಗಿ ನಡೆಯುವ ಮೆರವಣಿಗೆಯಲ್ಲಿ ಪಾಲ್ಗೊಳ್ಳುವ ಜಾನಪದ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆ ಬೇಗನೆ ಪೂರ್ಣವಾಗಬೇಕು. ಉತ್ಸವದಲ್ಲಿ ಕಾರ್ಯಕ್ರಮ ನೀಡುವ ಕಲಾವಿದರ ಆಯ್ಕೆ ಪ್ರಕ್ರಿಯೆ ಕೂಡ ಪಾರದರ್ಶಕವಾಗಿ ನಡೆಯಬೇಕು ಎಂದು ಮೆರವಣಿಗೆ ಮತ್ತು ಸಾಂಸ್ಕೃತಿಕ ಸಮಿತಿಗೆ ಸೂಚನೆ ನೀಡಿದರು.

ಉತ್ಸವದಲ್ಲಿ ಪಾಲ್ಗೊಳ್ಳುವ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಮಾಡಬೇಕು. ಮೇ 16 ಮತ್ತು 17ರಂದು ಎರಡು ದಿನಗಳ ಕಾಲ ನಡೆಯುವ ಕನಕಗಿರಿ ಉತ್ಸವದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬೇರೆ ಬೇರೆ ಸಮಿತಿಗಳು ಮತ್ತು ಪ್ರಚಾರ ಹಾಗೂ ಮಾಧ್ಯಮ ಸಮಿತಿ ಅಗತ್ಯ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಮಾತನಾಡಿ, ಗಣ್ಯರು, ಕಲಾವಿದರು ಮತ್ತು ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ಭದ್ರತಾ ವ್ಯವಸ್ಥೆಗೆ ಈಗಿನಿಂದಲೇ ಕ್ರಮ ವಹಿಸಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ, ಕನಕಗಿರಿ ತಾಲೂಕಿನಲ್ಲಿನ ಐತಿಹಾಸಿಕ ಸ್ಥಳಗಳೆಲ್ಲವೂ ಅಲಂಕಾರವಾಗಬೇಕು. ಎಲ್ಲ ಪ್ರಮುಖ ರಸ್ತೆಗಳು ಸುಗಮ ಸಂಚಾರಕ್ಕೆ ಸಿದ್ಧವಾಗಿರುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಪಂ ಉಪಕಾರ್ಯದರ್ಶಿ ಟಿ. ಕೃಷ್ಣಮೂರ್ತಿ, ಮುಖ್ಯ ಯೋಜನಾಧಿಕಾರಿ ಡಿ. ಮಂಜುನಾಥ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶರಣೇಗೌಡ ಪಾಟೀಲ್, ಕನಕಗಿರಿ ತಾಲೂಕು ಕಸಾಪ ಅಧ್ಯಕ್ಷ ಮಹೇಬೂಬ್, ಮುಖ್ಯ ಲೆಕ್ಕಾಧಿಕಾರಿ ಅಮೀನ ಅತ್ತಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಮಂಜುನಾಥ ಗುಂಡೂರು, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ ಉಪಸ್ಥಿತರಿದ್ದರು.

- ಉತ್ಸವ ಸಂದರ್ಭದಲ್ಲಿ ಕನಕಗಿರಿಯಲ್ಲಿ ಹಬ್ಬದ ವಾತಾವರಣ ನಿರ್ಮಾಣ ವಾಗಬೇಕು
- ಮೆರವಣಿಗೆ ಮಾರ್ಗ ಸೇರಿದಂತೆ ಎಲ್ಲ ಕಡೆಗೆ ವಿದ್ಯುದೀಪಾ ಲಂಕಾರಕ್ಕೆ ವ್ಯವಸ್ಥೆಯಾಗ ಬೇಕು
- ಉತ್ಸವದ ಅಂಗವಾಗಿ ನಡೆಯುವ ಮೆರವಣಿಗೆಯಲ್ಲಿ ಪಾಲ್ಗೊಳ್ಳುವ ಜಾನಪದ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆ ಬೇಗನೆ ಪೂರ್ಣವಾ ಗಬೇಕು


ಬಾಲ್ಯವಿವಾಹಕ್ಕೆ ನಕಲಿ ಶಾಲಾ ದೃಢೀಕರಣ ಪತ್ರ ನೀಡಿದವರ ವಿರುದ್ಧ ಪ್ರಕರಣ ದಾಖಲು

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಪರಿಣಾಮ

ಜಿಲ್ಲೆಯ ಯಲಬುರ್ಗಾ ತಾಲೂಕಿನ ತಾಳಕೇರಿ ಗ್ರಾಮದಲ್ಲಿ ಬಾಲ್ಯ ವಿವಾಹ ಮಾಡಲು ನಕಲಿ ಶಾಲಾ ದೃಢೀಕರಣ ಪತ್ರ ನೀಡಿದವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ತಿಳಿಸಿದ್ದಾರೆ.

''ಬಾಲ್ಯ ವಿವಾಹಕ್ಕಾಗಿ ನಕಲಿ ಶಾಲಾ ದೃಢೀಕರಣ ಪತ್ರ ನೀಡಿದ ಪಾಲಕರು'' ಎನ್ನುವ ತಲೆಬರಹದಡಿ ವಿಶೇಷ ವರದಿಯನ್ನು ''ಕನ್ನಡಪ್ರಭ'' ಪ್ರಕಟಿಸಿ, ಗಮನ ಸೆಳೆದಿತ್ತು. ಈಗ ಜಿಲ್ಲಾಧಿಕಾರಿ ಅವರೇ ಈ ವಿಷಯದ ಕುರಿತು ಕ್ರಮ ವಹಿಸಿದ್ದಾರೆ.



ಕನ್ನಡಪ್ರಭ
ಬಾಲ್ಯ ವಿವಾಹಕ್ಕಾಗಿ ನಕಲಿ ಶಾಲಾ ದೃಢೀಕರಣ ಪತ್ರ ನೀಡಿದ ಪಾಲಕರು
ಮಕ್ಕಳ ರಕ್ಷಣಾ ಘಟಕದ ಕಾರ್ಯಾಚರಣೆಯಿಂದ ಬೆಳಕಿಗೆ ಬಂದ ಪ್ರಕರಣ

ಯಲಬುರ್ಗಾ ತಾಲೂಕಿನ ತಾಳಕೇರಿ ಗ್ರಾಮದ ಈಶ್ವರ ದೇವಸ್ಥಾನದಲ್ಲಿ ಆಯೋಜಿಸಿದ್ದ ಸಾಮೂಹಿಕ ವಿವಾಹದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳ ವಿವಾಹಕ್ಕಾಗಿ ನಕಲಿ ಶಾಲಾ ದೃಢೀಕರಣ ಪತ್ರ ನೀಡಿದ್ದ ಬಗ್ಗೆ ವರದಿಯಾಗಿದೆ. ಈ ಬಗ್ಗೆ ಪರಿಶೀಲಿಸಿದ್ದು, ಸಮಿತಿಯ ವಿರುದ್ಧ ಶಾಲಾ ದೃಢೀಕರಣ ಪತ್ರ ನೀಡಿದ ಬಾಲಕಿಯ ಪಾಲಕರು ಹಾಗೂ ಈಶ್ವರ ದೇವಸ್ಥಾನ ಸಮಿತಿಯ ವಿರುದ್ಧ ಬೇವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ. ಈ ರೀತಿಯ ಪ್ರಕರಣಗಳು ಪುನರಾವರ್ತನೆಯಾಗದಂತೆ ಅಧೀನ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಿಗೆ ಈಗಾಗಲೇ ಸೂಚನೆ ನೀಡಲಾಗಿದೆ.

ಬಾಲ್ಯ ವಿವಾಹ ಮಾಡುವುದು, ಬಾಲ್ಯ ವಿವಾಹಕ್ಕೆ ಸಹಕಾರ, ಪ್ರೋತ್ಸಾಹ ನೀಡುವುದು ಸಹ ಶಿಕ್ಷಾರ್ಹ ಅಪರಾಧವಾಗಿದೆ. ಆದ್ದರಿಂದ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಿವಾಹ ಮಾಡಲು ನಕಲಿ ದಾಖಲೆಗಳನ್ನು ಸೃಷ್ಟಿಸಿದವರ ವಿರುದ್ಧ ಕಾನೂನು ಕ್ರಮಕ್ಕೆ ಗೊಳ್ಳಲಾಗುವುದು ಎಂದು ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಕಟಣೆ ತಿಳಿಸಿದೆ.

ಬಾನಿನಲ್ಲಿ ಹಾರಾಟ... ಶೇಷಾದ್ರಿ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಡಾ. ಶರಣಕುಮಾರ ಜತೆ ಜಿಲ್ಲಾಡಳಿತ ಮಾತುಕತೆ

ಕನಕಗಿರಿ ಉತ್ಸವದಲ್ಲಿ ಹೆಲಿಕಾಪ್ಟರ್ ರೌಂಡ್ಸ್ ವ್ಯವಸ್ಥೆ

• **ಎಂ. ಪ್ರಹ್ಲಾದ್**
ಕನ್ನಡಪ್ರಭ ವಾರ್ತೆ ಕನಕಗಿರಿ

ಈ ಬಾರಿ ಕನಕಗಿರಿ ಉತ್ಸವದ ವೇಳೆ ಜನರಿಗೆ ಹೆಲಿಕಾಪ್ಟರ್‌ನಲ್ಲಿ ಸುತ್ತಾಡುವ ಅವಕಾಶ ದೊರೆಯಲಿದೆ!

ಮೇ 16, 17ರಂದು ನಡೆಯಲಿರುವ ಕನಕಗಿರಿ 5ನೇ ಉತ್ಸವದ ಸಂದರ್ಭದಲ್ಲಿ ಜಿಲ್ಲಾಡಳಿತ ಇದೇ ಮೊದಲ ಬಾರಿಗೆ ಹೆಲಿಕಾಪ್ಟರ್‌ಪ್ರವಾಸದ ವ್ಯವಸ್ಥೆ ಮಾಡಲಿದೆ.

ರಾಜ್ಯದ ಹಲವು ಪ್ರಮುಖ ಉತ್ಸವಗಳಂತೆ ಕನಕಗಿರಿ ಉತ್ಸವವೂ ಅದ್ದೂರಿಯಾಗಿ ನಡೆಯಬೇಕೆಂಬ ಕನಸು ಸಚಿವ ಶಿವರಾಜ ತಂಗಡಗಿ ಅವರದ್ದಾಗಿತ್ತು. 2010, 2013, 2015 ಹಾಗೂ 2024ರಲ್ಲಿ ಉತ್ಸವ ಆಚರಿಸಿದ್ದು, ತಂಗಡಗಿ ಅವರ ಪರಿಶ್ರಮವೂ ಇದೆ. ಈ ಮೊದಲು ನಡೆದ ಎರಡು ಉತ್ಸವಗಳಲ್ಲಿ ಹೆಲಿಕಾಪ್ಟರ್‌ಪ್ರವಾಸ ವ್ಯವಸ್ಥೆ ಮಾಡುವ ಪ್ರಯತ್ನ ನಡೆಸಿದ್ದರು. ಆದರೆ ಹೆಲಿಕಾಪ್ಟರ್ ಪ್ರವಾಸದ ದರ ಹೆಚ್ಚಾಗಿದ್ದರಿಂದ ಆ ಆಲೋಚನೆ ಕೈ ಬಿಡಲಾಗಿತ್ತು. ಈ ಬಾರಿಯ ಉತ್ಸವದಲ್ಲಿ ಜನರಿಗೆ ಆಗಸದಿಂದ ಕನಕಗಿರಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ನೋಡುವ ಅವಕಾಶ ಸಿಗಲಿದೆ. ಅದರಿಂದ ಸ್ಥಳೀಯರು ಸಂತಸಗೊಂಡಿದ್ದಾರೆ.



ಕನಕಗಿರಿ ಉತ್ಸವದ ವೇಳೆ ಹಾರಾಡಲು ಸಿದ್ಧವಾಗಿರುವ ಹೆಲಿಕಾಪ್ಟರ್.

ಜಿಲ್ಲಾಡಳಿತ ಹಾಗೂ ಗಂಗಾವತಿಯ ಶೇಷಾದ್ರಿ ಶಿಕ್ಷಣ ಸಂಸ್ಥೆಯೊಂದಿಗೆ ಈಗಾಗಲೇ ಮಾತುಕತೆಯಾಗಿದ್ದು, ಬುಕ್ಕಿಂಗ್ ಸಹ ಆರಂಭಗೊಂಡಿದೆ. ಗಂಗಾವತಿ ಮೂಲದ ಶೇಷಾದ್ರಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಡಾ. ಶರಣಕುಮಾರ ಒಡೆತನದ ಹೆಲಿಕಾಪ್ಟರ್ ಕನಕಗಿರಿ ಬಾನಿನಲ್ಲಿ ಹಾರಾಟ ನಡೆಸಲಿದೆ.

ಬಾನೆತ್ತರದಿಂದ ಕನಕಗಿರಿ ವೀಕ್ಷಿಸಲು ₹3649 ನಿಗದಿಯಾಗಿದ್ದು, ಬುಕ್ಕಿಂಗ್ ಮಾಡಿದವರಿಗೆ ಮಾತ್ರ ಈ ದರ ತೆಗೆದುಕೊಳ್ಳಲಾಗುತ್ತದೆ. ಬುಕ್ಕಿಂಗ್ ಮಾಡದೆ ಇರುವವರಿಗೆ ₹3800 ನಿಗದಿ ಮಾಡಲಾಗಿದೆ. ಬುಕ್ಕಿಂಗ್ ಮಾಡಿದವರಿಗೆ ಮೊದಲ ಆದ್ಯತೆ ನೀಡಲಾಗುತ್ತಿದ್ದು, ಗ್ರಾಹಕರು ಬುಕ್ಕಿಂಗ್ ಮಾಡಿಕೊಳ್ಳಲು ಮುಂದಾಗಿದ್ದಾರೆ. 911089 2568 ಮೊಬೈಲ್ ಸಂಖ್ಯೆಗೆ ಕರೆ ಮಾಡಿ ಬುಕ್ಕಿಂಗ್ ಮಾಡಿಕೊಳ್ಳಬಹುದಾಗಿದೆ.

ಫ್ಯಾಮಿಲಿ ಪ್ಯಾಕೇಜ್ ವ್ಯವಸ್ಥೆ: ಕನಕಗಿರಿಯಿಂದ ಯುನೆಸ್ಕೋ ಪಟ್ಟಿಯಲ್ಲಿರುವ ಹಿರೇಬೆಣಕಲ್ ಮೊರೆರ್‌ಗುಹೆ, ಅಂಜನಾದ್ರಿ ಪರ್ವತ, ಹಂಪಿ, ಆನೆಗೊಂದಿ, ನವವೃಂದಾವನ, ಪಂಪಾ ಸರೋವರ ಸೇರಿದಂತೆ ನಾನಾ ಐತಿಹ್ಯ ಕೇಂದ್ರಗಳ ವೀಕ್ಷಣೆಗೆ ಫ್ಯಾಮಿಲಿ ಪ್ಯಾಕೇಜ್ ವ್ಯವಸ್ಥೆಯೂ ಮಾಡಲಾಗಿದೆ. ಫ್ಯಾಮಿಲಿ ಪ್ಯಾಕೇಜ್‌ನ ದರ ಇನ್ನೂ ನಿಗದಿಗೊಳಿಸಿಲ್ಲ. ಇಂಧನ ದುಬಾರಿಯಾದ ಹಿನ್ನೆಲೆ ದರ ಹೆಚ್ಚಿಸುವುದು ಅನಿವಾರ್ಯವಾಗಿದೆ. ರಾಜ್ಯದ ಹಲವು ಉತ್ಸವಗಳ ಪೈಕಿ ಈ ಉತ್ಸವದಲ್ಲಿ ಹೆಲಿಕಾಪ್ಟರ್ ದರ ನಿಗದಿ ಕಡಿಮೆ ಮಾಡಲಾಗಿದೆ ಎಂದು ಸಂಸ್ಥೆ ತಿಳಿಸಿದೆ.

> ಕನಕಗಿರಿ ಕ್ಷೇತ್ರದ ಜನ ಬಡವರಿದ್ದಾರೆ. ಬಡವರು ಸಹ ಹೆಲಿಕಾಪ್ಟರನಲ್ಲಿ ಓಡಾಡಲಿ ಎನ್ನುವುದು ನನ್ನ ಆಸೆಯಿಂದ ನಾನೆ ಮುತುವರ್ಜಿ ವಹಿಸಿ ಹೆಲಿಕಾಪ್ಟರ್ ವ್ಯವಸ್ಥೆ ಮಾಡಿದ್ದೇನೆ. ಸಾಧ್ಯವಾದಷ್ಟು ದರ ಕಡಿಮೆಗೊಳಿಸಲು ಕಂಪನಿಯವರ ಜತೆ ಚರ್ಚಿಸಿದ್ದೇನೆ.
> • **ಶಿವರಾಜ ತಂಗಡಗಿ** ಸಚಿವ

ತಮಿಳುನಾಡು, ಪಶ್ಚಿಮ ಬಂಗಾಳ ಹಾಗೂ ಅಸ್ಸಾಂ ರಾಜ್ಯಗಳಲ್ಲಿ ಕಾಂಗ್ರೆಸ್ ಅಸ್ತಿತ್ವದಲ್ಲಿ ಇದೆಯೇ ಎಂಬುದನ್ನು ಹುಡುಕುವ ಪರಿಸ್ಥಿತಿ ಬಂದಿದೆ. ಕೇರಳದಲ್ಲಿ ಆಡಳಿತ ವಿರೋಧದ ಅಲೆಗೆ ಮತದಾರರು ಮತ ಚಲಾಯಿಸಿದ್ದಾರೆ.

• **ಸಿ.ವಿ. ಚಂದ್ರಶೇಖರ್** ಜೆಡಿಎಸ್ ರಾಜ್ಯ ಕೋರ್‌ಕಮಿಟಿ ಸದಸ್ಯ

ಸುದ್ದಿ ಸಿಂಚನ

ಬಿಜೆಪಿ ಮೂರು ರಾಜ್ಯಗಳಲ್ಲಿ ಐತಿಹಾಸಿಕ ಗೆಲುವು: ಗುಳಗಣ್ಣವರ




ಕೊಪ್ಪಳ: ಬಿಜೆಪಿ ಮೂರು ರಾಜ್ಯಗಳಲ್ಲಿ ಐತಿಹಾಸಿಕ ಗೆಲುವು ಸಾಧಿಸಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಕುಮಾರ ಗುಳಗಣ್ಣವರ ಹೇಳಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಮಹತ್ವದ ವಿಜಯವು ದೇಶದ ಜನತೆ ಅಭಿವೃದ್ಧಿ, ಸುಶಾಸನ ಮತ್ತು ಪಾರದರ್ಶಕ ಆಡಳಿತದ ಮೇಲಿರುವ ಭರವಸೆಯನ್ನು ಮತ್ತೊಮ್ಮೆ ದೃಢಪಡಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದಿಟ್ಟ ನಾಯಕತ್ವ ಮತ್ತು ಜನಪರ ಯೋಜನೆಗಳು ಜನಮನ ಗೆದ್ದಿವೆ. ಪಕ್ಷದ ಕಾರ್ಯಕರ್ತರ ಶ್ರಮ, ಸಂಘಟನೆಯ ಬಲ ಮತ್ತು ಜನರ ಆಶೀರ್ವಾದವೇ ಈ ವಿಜಯದ ಮೂಲಶಕ್ತಿ. ಈ ಫಲಿತಾಂಶಗಳು ದೇಶದ ಅಭಿವೃದ್ಧಿಯ ದಿಕ್ಕಿನಲ್ಲಿ ಮತ್ತೊಂದು ಮೈಲಿಗಲ್ಲಾಗಿದ್ದು, ''ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್'' ಎಂಬ ದೃಷ್ಟಿಕೋನವನ್ನು ಜನರು ಮತ್ತೊಮ್ಮೆ ಒಪ್ಪಿಕೊಂಡಿರುವುದಕ್ಕೆ ಸಾಕ್ಷಿಯಾಗಿದೆ. ಮುಂದಿನ ದಿನಗಳಲ್ಲಿ ಜನರ ವಿಶ್ವಾಸಕ್ಕೆ ತಕ್ಕಂತೆ ಇನ್ನಷ್ಟು ಸಮರ್ಪಕ ಸೇವೆ ನೀಡಲು ಮತ್ತು ರಾಷ್ಟ್ರೀಯತೆ ಎತ್ತಿ ಹಿಡಿಯಲು ಬಿಜೆಪಿ ಬದ್ಧವಾಗಿದೆ ಎಂದು ಹೇಳಿದ್ದಾರೆ.

ಅಭಿವೃದ್ಧಿಗೆ ಮತದಾರರ ಒಲವು: ಸಂತಸ



ಕೊಪ್ಪಳ: ಪಂಚ ರಾಜ್ಯ ಚುನಾವಣೆಯಲ್ಲಿ ಮೂರು ರಾಜ್ಯಗಳಲ್ಲಿ ಎನ್‌ಡಿಎ ಬೆಂಬಲಿಸುವ ಮೂಲಕ ಮತದಾರರು, ಅಭಿವೃದ್ಧಿ ರಾಜಕಾರಣಕ್ಕೆ ಬೆಂಬಲಿಸಿರುವುದು ಸಂತಸ ತಂದಿದೆ ಎಂದು ಜೆಡಿಎಸ್ ರಾಜ್ಯ ಕಾರ್ಯದರ್ಶಿ ವೀರೇಶ ಮಹಾಂತಯ್ಯನಮಠ ಹೇಳಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಪುದುಚೇರಿ, ಅಸ್ಸಾಂ, ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣೆಯಲ್ಲಿ ಎನ್‌ಡಿಎ ಬಹುಮತ ಗಳಿಸಿರುವುದು ಮಹತ್ವದ ಬೆಳವಣಿಗೆಯಾಗಿದೆ. ಅದರಲ್ಲಿಯೂ ಕಳೆದ 15 ವರ್ಷಗಳಿಂದ ಪಶ್ಚಿಮ ಬಂಗಾಳದಲ್ಲಿ ಆಡಳಿತ ನಡೆಸಿರುವ ಟಿಎಂಸಿ ಮಮತಾ ಬ್ಯಾನರ್ಜಿ ಆಡಳಿತಕ್ಕೆ ಬೇಸತ್ತಿದ್ದ ಅಲ್ಲಿನ ಮತದಾರರು, ಕೊನೆಗೆ ಎನ್‌ಡಿಎ ಬೆಂಬಲಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಿದ್ದಾರೆ. ದೇಶದ ಇತಿಹಾಸದ ಚುನಾವಣೆಯಲ್ಲಿಯೇ ಇದೊಂದು ಮೈಲುಗಲ್ಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿಯ ಸಂಕಲ್ಪಗಳು, ದೇಶದ ಭದ್ರತೆಯ ವಿಚಾರವನ್ನಿಟ್ಟುಕೊಂಡು ಪಶ್ಚಿಮ ಬಂಗಾಳದ ಮತದಾರರು ಕೊನೆಗೆ ತಮ್ಮ ನಿಲುವು ಬದಲಿಸಿದ್ದಾರೆ ಎಂದು ಹೇಳಿದ್ದಾರೆ. ಇನ್ನೂ ಅಸ್ಸಾಂನಲ್ಲಿ ಸತತ ಮೂರನೇ ಬಾರಿ ಎನ್‌ಡಿಎಗೆ ಬಹುಮತ ದೊರತಿದೆ. ಪುದುಚೇರಿಯಲ್ಲಿ ಜನರು ಎನ್‌ಡಿಎಗೆ ಅವಕಾಶ ನೀಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಪರ ಒಲವು ದೇಶದಲ್ಲಿ ಸ್ಪಷ್ಟ: ಸುರೇಶ



ಕೊಪ್ಪಳ: ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಒಕ್ಕೂಟದಲ್ಲಿ ಮತದಾರ ವಿಶ್ವಾಸ ಇಟ್ಟಿರುವುದು ನಾಲ್ಕು ರಾಜ್ಯಗಳ ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣಾ ಫಲಿತಾಂಶಗಳಲ್ಲಿ ಸ್ಪಷ್ಟವಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಸುರೇಶ್ ಭೂಮರಡ್ಡಿ ಹೇಳಿದರು. ಈ ಕುರಿತು ಪ್ರಕಟಣೆ ನೀಡಿರುವ ಅವರು, ಪಶ್ಚಿಮ ಬಂಗಾಳದಲ್ಲಿ ಒಕ್ಕೂಟದ ಗೆಲುವು ಐತಿಹಾಸಿಕ. ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಚುನಾವಣಾ ತಂತ್ರಗಾರಿಕೆ, ಉತ್ತರ ಪ್ರದೇಶ ಮತ್ತು ಅಸ್ಸಾಂ ಮುಖ್ಯಮಂತ್ರಿಗಳಾದ ಯೋಗಿ ಆದಿತ್ಯನಾಥ್ ಮತ್ತು ಹಿಮಂತ್ ಬಿಸ್ವ ಶರ್ಮ ಅವರ ತಳಮಟ್ಟದ ಸಂಘಟನಾ ಕಾರ್ಯ ಫಲಿಸಿದೆ. ಮೈತ್ರಿ ಪಕ್ಷದ ನಾಯಕರು ಮತ್ತು ನಮ್ಮ ಪಕ್ಷದ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಅವರು ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣದಲ್ಲಿ ವ್ಯಾಪಕ ಪ್ರಚಾರ ಮಾಡಿದರು. ಇದರಿಂದಾಗಿ ಕಾಂಗ್ರೆಸ್ ನಿರೀಕ್ಷಿತ ಪ್ರಮಾಣದಲ್ಲಿ ಮತ ಪಡೆಯಲಾಗಲಿಲ್ಲ. ಉಪಚುನಾವಣೆಗಳಲ್ಲಿ ಆಡಳಿತ ಪಕ್ಷ ಗೆಲ್ಲುವುದು ಸಹಜ. ಹಣ ಬಲ, ತೋಳ್ಬಲ ಹಾಗೂ ಅಧಿಕಾರ ದುರುಪಯೋಗಪಡಿಸಿಕೊಂಡು ಆ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ ಎಂದು ತಿಳಿಸಿದ್ದಾರೆ.



ಕುಷ್ಟಗಿ ತಾಲೂಕಿನ ತಾವರಗೇರಾ ಪಟ್ಟಣದಲ್ಲಿ ಸೋಮವಾರ ಶ್ಯಾಮೀದ ವಲಿ ದರ್ಗಾದಲ್ಲಿ ಉರೂಸ್ ಸಂಭ್ರಮದಿಂದ ನಡೆಯಿತು. ಭಕ್ತರು ಸಾಲುನಿಂತು ಸಕ್ಕರೆ ನೈವೇದ್ಯ ಸಲ್ಲಿಸಿ, ದರ್ಶನ ಪಡೆದರು.



ಕೊಪ್ಪಳ ತಾಲೂಕಿನ ಮೈನಹಳ್ಳಿ ಗ್ರಾಮದಲ್ಲಿ ಶ್ರೀ ಶಿವಶರಣೆ ಬುಡ್ಡಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾರಥೋತ್ಸವ ಸೋಮವಾರ ಸಂಜೆ ವಿಜೃಂಭಣೆಯಿಂದ ನಡೆಯಿತು.



ಕೊಪ್ಪಳ ನಗರಸಭೆ ಮುಂದೆ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ನೇತೃತ್ವದಲ್ಲಿ ನಡೆಸುತ್ತಿರುವ ಬಲ್ಡೋಟ ಹಟಾವೋ ಕೊಪ್ಪಳ ಬಚಾವೋ ಧರಣಿ 185ನೇ ದಿನದಲ್ಲಿ ಮುಂದುವರಿಯಿತು.

ಮೋದಿ, ರಾಹುಲ್ ಘೋಷಣೆ ಪೈಪೋಟಿ

ಏಕಕಾಲದಲ್ಲಿ ಬಿಜೆಪಿ, ಕಾಂಗ್ರೆಸ್ ವಿಜಯೋತ್ಸವದಿಂದ ಗೊಂದಲ, ಬಿಜೆಪಿ , ಕಾಂಗ್ರೆಸ್ ನಾಯಕರ ಸಮಾಧಾನ ಮಾಡಿದ ಪೊಲೀಸರು

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ನಗರದ ಅಶೋಕ ವೃತ್ತದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಏಕಕಾಲದಲ್ಲಿಯೇ ವಿಜಯೋತ್ಸವ ನಡೆಸಿದ್ದರಿಂದ ಹೈಡ್ರಾಮಾವೇ ನಡೆಯಿತು. ಅಲ್ಲದೆ ಪೈಪೋಟಿಯಲ್ಲಿ ರಾಹುಲ್, ಮೋದಿ ಪರ ಘೋಷಣೆಗಳು ಮೊಳಗಿದವು. ಪರಸ್ಪರ ಕೂಗಾಟ ನಡೆದಿದ್ದರಿಂದ ಪರಿಸ್ಥಿತಿ ಕೈಮೀರುವ ಸಾಧ್ಯತೆ ಅರಿತ ಪೊಲೀಸರು ತಕ್ಷಣ ಜಾಗ್ರತರಾಗಿ ಪರಿಸ್ಥಿತಿ ತಿಳಿಗೊಳಿಸಿದರು.

ಆಗಿದ್ದೇನು?: ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಬಿಜೆಪಿ ಮುಖಂಡರು ವಿಜಯೋತ್ಸವ ಆಚರಿಸುತ್ತಿದ್ದರು. ಪರಸ್ಪರ ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸುತ್ತಿದ್ದರು. ಇನ್ನೇನು ಬಿಜೆಪಿ ವಿಜಯೋತ್ಸವ ಮುಗಿಯುವ ಹಂತದಲ್ಲಿತ್ತು. ಅದೇ ವೇಳೆಗೆ ಕಾಂಗ್ರೆಸ್ ನಾಯಕರು ಜಯಘೋಷಣೆಗಳನ್ನು ಕೂಗುತ್ತಾ ಅಲ್ಲಿಗೆ ಆಗಮಿಸಿದರು. ಆಗ ಎರಡೂ ಪಕ್ಷದ ಕಾರ್ಯಕರ್ತರು ಪೈಪೋಟಿಗೆ ಬಿದ್ದವರಂತೆ ರಾಹುಲ್ ಗಾಂಧಿ, ಮೋದಿ ಎಂದು ಘೋಷಣೆ ಕೂಗಿದರು. ಇದು ಗೊಂದಲಕ್ಕೆ ಕಾರಣವಾಯಿತು. ಪರಸ್ಪರ ವಾಕ್ಸಮರಕ್ಕೂ ಕಾರಣವಾಯಿತು. ಈ ಪರಿಸ್ಥಿತಿಯಲ್ಲಿ ಕೈಮೀರುವ ಸಾಧ್ಯತೆ ಇರುವುದನ್ನು ಅರಿತ ಪೊಲೀಸರು ಎರಡೂ ಪಕ್ಷದ ಕಾರ್ಯಕರ್ತರ ನಡುವೆ ಕಾವಲು ನಿಂತರು. ಕಾರ್ಯಕರ್ತರನ್ನು ಪರಸ್ಪರ ದೂರ ಸರಿಸಿ ಪರಿಸ್ಥಿತಿ ತಿಳಿಗೊಳಿಸಿದರು.



ಕಾಂಗ್ರೆಸ್ ಕಾರ್ಯಕರ್ತರು ಕೊಪ್ಪಳ ಅಶೋಕ ವೃತ್ತದಲ್ಲಿ ವಿಜಯೋತ್ಸವ ಆಚರಿಸಿದರು.



ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಪಂಚ ರಾಜ್ಯ ಫಲಿತಾಂಶ ನವ ಭಾರತದ ದಿಕ್ಸೂಚಿ: ಡಾ. ಕ್ಯಾವಟರ್

• **ಕನ್ನಡಪ್ರಭ ವಾರ್ತೆ** ಕೊಪ್ಪಳ



ಪಂಚರಾಜ್ಯ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ ಮತ್ತು ಪುದುಚೇರಿ ಹಾಗೂ ಅಸ್ಸಾಂ ರಾಜ್ಯಗಳಲ್ಲಿ ಅಲ್ಲಿಯ ಮತದಾರರು ಎನ್‌ಡಿಎ ಬೆಂಬಲಿಸುವ ಮೂಲಕ ನವ ಭಾರತಕ್ಕೆ ದಿಕ್ಸೂಚಿಯಾಗಿದ್ದಾರೆ ಎಂದು ಬಿಜೆಪಿ ಮುಖಂಡ ಡಾ. ಬಸವರಾಜ ಕ್ಯಾವಟರ್‌ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಫಲಿತಾಂಶದ ಮೂಲಕ ಮತದಾರರು ಅಭಿವೃದ್ಧಿ, ಸ್ಥಿರತೆ ಮತ್ತು ಭದ್ರತೆಗೆ ಮನ್ನಣೆ ನೀಡಿದ್ದಾರೆ. ಇಂದು ದೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲೆ ಜನರ ವಿಶ್ವಾಸ ಮತ್ತೊಮ್ಮೆ ವ್ಯಕ್ತವಾಗಿದೆ. ಇಂದಿನ ಪಂಚರಾಜ್ಯಗಳ ಚುನಾವಣಾ ಫಲಿತಾಂಶಗಳು ದೇಶಾದ್ಯಂತ ''ಮೋದಿ ಹವಾ'' ಇನ್ನೂ ಮುಂದುವರಿದಿದೆ ಎಂಬುದನ್ನು ಸ್ಪಷ್ಟವಾಗಿ ಸಾಬೀತುಪಡಿಸಿವೆ. ಪಶ್ಚಿಮ ಬಂಗಾಳದ ಫಲಿತಾಂಶವು ದೇಶದ ಪ್ರಜಾಪ್ರಭುತ್ವ ಮತ್ತು ನ್ಯಾಯಾಂಗ ವ್ಯವಸ್ಥೆಯ ಮೇಲೆ ಜನರ ನಂಬಿಕೆಗೆ ದೊಡ್ಡ ಜಯ ತಂದುಕೊಟ್ಟಿದೆ. ಮಮತಾ ಬ್ಯಾನರ್ಜಿ ಅವರ ಆಡಳಿತದಲ್ಲಿ ರಾಜ್ಯದ ಜನತೆ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದರು. ಇದೀಗ ಬಂದಿರುವ ಫಲಿತಾಂಶವು ಆ ರಾಜ್ಯದಲ್ಲಿ ಬದಲಾವಣೆಯ ಆಶೆಯನ್ನು ಮೂಡಿಸಿದ್ದು, ದೇಶದ ಜನರು ಈ ಬೆಳವಣಿಗೆಯನ್ನು ಸ್ವಾಗತಿಸುತ್ತಿದ್ದಾರೆ.

ಇನ್ನೊಂದೆಡೆ, ರಾಜ್ಯದ ಎರಡು ವಿಧಾನಸಭಾ ಉಪಚುನಾವಣೆಗಳಲ್ಲಿ ನಮ್ಮ ಅಭ್ಯರ್ಥಿಗಳು ಜಯ ಸಾಧಿಸದಿರುವುದು ನಮಗೆ ಸ್ವಲ್ಪ ನಿರಾಶೆ ತಂದಿದೆ. ಆದಾಗ್ಯೂ, ಇದನ್ನು ಪಾಠವಾಗಿ ತೆಗೆದುಕೊಂಡು ಮುಂದಿನ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಸಂಘಟನೆ ಬಲಪಡಿಸುವ ಕಾರ್ಯವನ್ನು ಇನ್ನಷ್ಟು ತೀವ್ರಗೊಳಿಸಲಾಗುತ್ತದೆ ಎಂದರು.

ಕೇರಳ ಕೈ ಗೆಲುವಿಗೆ ಕಾಂಗ್ರೆಸ್ ಸಂಭ್ರಮಾಚರಣೆ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ರಾಜ್ಯ ಉಪಚುನಾವಣೆಯಲ್ಲಿ ದಾವಣಗೆರೆ ಮತ್ತು ಬಾಗಲಕೋಟೆ ಕ್ಷೇತ್ರಗಳಲ್ಲಿ ಹಾಗೂ ಕೇರಳದಲ್ಲಿ ಜಯಶಾಲಿಯಾಗಿದ್ದಕ್ಕೆ ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ರಾಹುಲ್ ಗಾಂಧಿ ಎಂದು ಘೋಷಣೆ ಕೂಗಿದ್ದು ಅಲ್ಲದೆ, ರಾಜ್ಯದಲ್ಲಿ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿದ್ದಕ್ಕೆ ಜಯಕಾರ ಹಾಕಲಾಯಿತು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ವಿಶ್ವಾಸ ಮೂಡಿದೆ, ಇವು ಸಾಮಾನ್ಯ ಜನರ ಬದುಕಿಗೆ ಆಸರೆಯಾಗಿದ್ದು, ಕಾಂಗ್ರೆಸ್ ಉತ್ತಮ ಆಡಳಿತವನ್ನು ನೋಡಿ ಜನರು ಬಹುಮತದಿಂದ ಗೆಲ್ಲಿಸಿದ್ದಾರೆ. ಈ ಗೆಲುವು ಮೂರು ವರ್ಷದ ಆಡಳಿತಕ್ಕೆ ಹಿಡಿದ ಕನ್ನಡಿ, ಕೇರಳ ಮತ್ತೆ ಕೈ ವಶವಾಗಿದ್ದು, ವಿದ್ಯಾವಂತರು ಕಾಂಗ್ರೆಸ್ ಸಾಧನೆ ಗಮನಿಸಿ ಬೆಂಬಲಿಸಿದ್ದಾರೆ ಎಂದರು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಾ ಇಟ್ಟಂಗಿ, ಮುಖಂಡರಾದ ಅಕ್ಬರ್‌ಪಾಶಾ ಪಲ್ಟನ್, ಸುರೇಶ ದಾಸರಡ್ಡಿ, ಮಾನವಿ ಪಾಶಾ, ಚಿಕನ್ ಪೀರಾ, ಶ್ರೀನಿವಾಸ ಪಂಡಿತ, ಮೌನೇಶ ವಡ್ಡಟ್ಟಿ, ಮಲ್ಲಿಕಾರ್ಜುನ ಪೂಜಾರ, ಯಶೋದಾ ಮರಡಿ, ಪದ್ಮಾ ಕಂಬಳಿ, ಗಂಗಮ್ಮ, ಬಸಯ್ಯಸ್ವಾಮಿ, ನಾಸೀರಹುಸೇನ, ಅಶೋಕ ಗೋರಂಟ್ಲಿ, ಆಸೀಫ್ ಇದ್ದರು.

■ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ವಿಶ್ವಾಸ ಮೂಡಿದೆ, ಇವು ಸಾಮಾನ್ಯ ಜನರ ಬದುಕಿಗೆ ಆಸರೆಯಾಗಿದ್ದು, ಕಾಂಗ್ರೆಸ್ ಉತ್ತಮ ಆಡಳಿತವನ್ನು ನೋಡಿ ಜನರು ಬಹುಮತದಿಂದ ಗೆಲ್ಲಿಸಿದ್ದಾರೆ.

ಕಾಂಗ್ರೆಸ್ ನಿರ್ಗಮನದ ಕ್ಷಣಗಣನೆ ಆರಂಭ: ಸಿವಿಸಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ



ನಾಲ್ಕು ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣಾ ಫಲಿತಾಂಶಗಳು ಕರ್ನಾಟಕದಲ್ಲಿಕಾಂಗ್ರೆಸ್‌ಅಧಿಕಾರದಿಂದ ನಿರ್ಗಮಿಸುವ ಕ್ಷಣಗಣನೆಯ ಆರಂಭದ ಸೂಚಕ ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿ.ವಿ. ಚಂದ್ರಶೇಖರ್ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ತಮಿಳುನಾಡು, ಪಶ್ಚಿಮ ಬಂಗಾಳ ಹಾಗೂ ಅಸ್ಸಾಂ ರಾಜ್ಯಗಳಲ್ಲಿ ಕಾಂಗ್ರೆಸ್ ಅಸ್ತಿತ್ವದಲ್ಲಿ ಇದೆಯೇ ಎಂಬುದನ್ನು ಹುಡುಕುವ ಪರಿಸ್ಥಿತಿ ಬಂದಿದೆ. ಕೇರಳದಲ್ಲಿ ಆಡಳಿತ ವಿರೋಧದ ಅಲೆಗೆ ಮತದಾರರು ಮತ ಚಲಾಯಿಸಿದ್ದಾರೆ. ಗುಂಪುಗಾರಿಕೆ ಹಾಗೂ ದೂರದೃಷ್ಟಿ ಕೊರತೆಯ ನಾಯಕತ್ವದ ಫಲವಾಗಿ ಕಾಂಗ್ರೆಸ್ ಸಂಪೂರ್ಣವಾಗಿ ನೆಲ ಕಚ್ಚಿದೆ. ಕರ್ನಾಟಕದಲ್ಲಿ ಅಧಿಕಾರ ಲಾಲಸೆ ಹಾಗೂ ಒಳಜಗಳದಿಂದ ಆ ಪಕ್ಷ ಜನರ ವಿಶ್ವಾಸ ಕಳೆದುಕೊಂಡಿದೆ ಎಂದು ಹೇಳಿದ್ದಾರೆ.

ಚುನಾವಣೆ ನಡೆದ ಪ್ರದೇಶಗಳಲ್ಲಿ ಎನ್‌ಡಿಎ ಒಕ್ಕೂಟದ ಮತ ಗಳಿಕೆ ಪ್ರಮಾಣ ಗಮನಾರ್ಹವಾಗಿ ಏರಿಕೆಯಾಗಿದೆ. ಒಕ್ಕೂಟದ ನಾಗಾಲೋಟ ಮುಂದುವರಿದಿದೆ. ಇದರಿಂದ ಪ್ರೇರೇಪಿತವಾಗಿ ಕರ್ನಾಟಕದಲ್ಲಿ ಮೈತ್ರಿಕೂಟ ಮತ್ತಷ್ಟು ಸಂಘಟನೆಗೊಂಡು ಕಾಂಗ್ರೆಸ್ ಅಧಿಕಾರದಿಂದ ಕಿತ್ತು ಎಸೆಯುವುದು ನಿಶ್ಚಿತ ಎಂದು ತಿಳಿಸಿದ್ದಾರೆ.

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಮತಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಧಿಕಾರ ದುರ್ಬಳಕೆ ಮಾಡಿಕೊಂಡಿದೆ. ಸ್ವತಃ ಮುಖ್ಯಮಂತ್ರಿ ಹಾಗೂ ಅವರ ಸಂಪುಟದ ಸದಸ್ಯರು ಬಾಗಲಕೋಟೆಯಲ್ಲಿ ಗೆಲುವಿಗಾಗಿರಿಕಾಣಿಹೂಡಿದರು. ದಾವಣಗೆರೆಯಲ್ಲಿ ಆ ಪಕ್ಷದ ಸಾಂಪ್ರದಾಯಕ ಮತ ಬ್ಯಾಂಕ್ ವಿಭಜನೆಗೊಂಡಿದೆ. ಇವು ಕಾಂಗ್ರೆಸ್ ಪಕ್ಷದ ಪತನದ ಸೂಚನೆಗಳು ಎಂದು ಹೇಳಿದ್ದಾರೆ.

ಮೂರು ರಾಜ್ಯಗಳಲ್ಲಿ ಬಿಜೆಪಿಗೆ ಬಹುಮತ, ಆನಂದರಾವ್ ಸಂತಸ

• **ಕನ್ನಡಪ್ರಭ ವಾರ್ತೆ** ಗಂಗಾವತಿ



ಪುದುಚೇರಿ, ಅಸ್ಸಾಂ ಮತ್ತು ಪಶ್ಚಿಮ ಬಂಗಾಳ ಈ ಮೂರು ರಾಜ್ಯಗಳಲ್ಲಿ ಬಿಜೆಪಿ ಸರಳ ಬಹುಮತದೊಂದಿಗೆ ವಿಜಯ ಸಾಧಿಸಿರುವ ಹಿನ್ನೆಲೆಯಲ್ಲಿ ಬಿಜೆಪಿ ಹಿರಿಯ ನಾಯಕ ವೈ. ಆನಂದರಾವ್ ಸಂತಸ ವ್ಯಕ್ತಪಡಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಪ್ರಭಾವ ಮತ್ತು ಜನಪರ ಕಾರ್ಯಗಳು ಮೂರು ರಾಜ್ಯದ ಮತದಾರರು ಸ್ಪಂದಿಸಿದ್ದಾರೆ. ಅದರಂತೆ ಮುಂಬರುವ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ವೈ. ಆನಂದರಾವ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಿಜೆಪಿಗೆ ಭರ್ಜರಿ ಗೆಲವು, ಕೊಪ್ಪಳದಲ್ಲಿ ವಿಜಯೋತ್ಸವ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಪಂಚ ರಾಜ್ಯ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಪುದುಚೇರಿ, ಅಸ್ಸಾಂನಲ್ಲಿ ಭರ್ಜರಿ ಗೆಲವು ಸಾಧಿಸಿದ್ದಕ್ಕೆ ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಬಿಜೆಪಿ ನಾಯಕರು, ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಅಶೋಕ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ನಾಯಕರು, ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರಲ್ಲದೆ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ದೇಶದ ಇತಿಹಾಸದಲ್ಲಿ ಹೊಸ ದಿಕ್ಸೂಚಿಯನ್ನು ಮತದಾರರು ನೀಡಿದ್ದಾರೆ. ಪಶ್ಚಿಮ ಬಂಗಾಳದ ಸರ್ಕಾರ ಕಿತ್ತೊಗೆದು ಬಿಜೆಪಿಗೆ ಅಭೂತಪೂರ್ವ ಗೆಲುವು ತಂದುಕೊಟ್ಟಿದ್ದಾರೆ. ಅಸ್ಸಾಂ ರಾಜ್ಯದಲ್ಲಿಯೂ ಭಾರಿ ಅಂತರದ ಗೆಲುವು ಆಗಿದ್ದು, ಬಿಜೆಪಿ ಆಡಳಿತ ಮೆಚ್ಚಿ ಮತದಾರರು ಮತ್ತೆ ಬೆಂಬಲಿಸಿದ್ದಾರೆ. ಪುದುಚೇರಿಯಲ್ಲಿಯೂ ಮತದಾರರು ಬಿಜೆಪಿಗೆ ಗೆಲುವು ನೀಡಿದ್ದಾರೆ ಎಂದು ಹೇಳಿದರು.

ಮತದಾರರು ದೊಡ್ಡ ಪ್ರಮಾಣದಲ್ಲಿ ಬಿಜೆಪಿಗೆ ಬೆಂಬಲ ಸೂಚಿಸಿದ್ದು, ಇದರಿಂದ ರಾಜ್ಯದಲ್ಲಿಯೂ ಮುಂದೆ ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎನ್ನುವುದು ಸ್ಪಷ್ಟವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ದುರಾಡಳಿತದಿಂದ ಮತದಾರರು ಬೇಸತ್ತು ಹೋಗಿದ್ದಾರೆ. ಯಾವುದೇ ಅಭಿವೃದ್ಧಿಯೂ ಇಲ್ಲ. ಕೊಪ್ಪಳ ಜಿಲ್ಲೆಯಲ್ಲಿಯೂ ಅಭಿವೃದ್ಧಿ ಮರೀಚಿಕೆಯಾಗಿದ್ದು, ಇದಕ್ಕೆ ತಕ್ಕ ಪಾಠ ಕಲಿಸಲು ಮತದಾರರು ತುದಿಗಾಲ ಮೇಲೆ ನಿಂತಿದ್ದಾರೆ ಎಂದರು.

ಬಿಜೆಪಿ ರಾಜ್ಯ ಕೋರ್‌ಕಮಿಟಿ ಸದಸ್ಯ ಡಾ. ಬಸವರಾಜ ಕ್ಯಾವಟರ್‌ಮಾತನಾಡಿ, ದೇಶದ ಪಂಚ ರಾಜ್ಯಗಳ ಚುನಾವಣೆಯಲ್ಲಿ ಮತದಾರರು ಬಿಜೆಪಿಗೆ ಬೆಂಬಲ ನೀಡಿದ್ದಾರೆ. ಅದರಲ್ಲೂ ಪಶ್ಚಿಮ ಬಂಗಾಳದಲ್ಲಿ ಅತ್ಯಂತ ದೊಡ್ಡ ಗೆಲವು ಸಿಕ್ಕಿರುವುದು ಮತ್ತು ಅಲ್ಲಿಯ ಸರ್ಕಾರವನ್ನು ಕಿತ್ತೊಗೆಯುವ ಮೂಲಕ ಮತದಾರರು ಬಿಜೆಪಿ ಬೆಂಬಲಿಸಿದ್ದಾರೆ ಎಂದು ಹೇಳಿದರು.

ರಾಜ್ಯದ ಮೇಲೆಯೂ ಚುನಾವಣೆ ಫಲಿತಾಂಶ ಪರಿಣಾಮ ಬೀರಲಿದೆ. ಆಡಳಿತ ಯಂತ್ರ ದುರುಪಯೋಗ ಮಾಡಿಕೊಂಡು ಈಗ ಕಾಂಗ್ರೆಸ್ ಎರಡು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿರಬಹುದು. ಆದರೆ, ಮುಂಬರುವ ಚುನಾವಣೆಯಲ್ಲಿ ಮತ್ತೆ ಬಿಜೆಪಿಗೆ ಅಧಿಕಾರ ನೀಡಲು ಮತದಾರರು ಉತ್ಸುಕರಾಗಿದ್ದಾರೆ ಎಂದರು.

ರಾಜ್ಯದಲ್ಲಿ ಆಡಳಿತಯಂತ್ರ ಕುಸಿದು ಹೋಗಿದೆ. ಜನರು ರೋಸಿ ಹೋಗಿದ್ದಾರೆ. ಅಭಿವೃದ್ಧಿಯೂ ಇಲ್ಲದಂತೆಆಗಿದೆಎಂದುಆಕ್ರೋಶವ್ಯಕ್ತಪಡಿಸಿದರು. ಗೀತಾ ಮುತ್ತಾಳ, ಸುನೀಲ ಹೆಸರೂರು, ಅಮರೇಶ, ಮಹಾಲಕ್ಷ್ಮಿ ಕಂದಾರಿ ಇದ್ದರು.

ಮೂರು ರಾಜ್ಯಗಳಲ್ಲಿ ಬಿಜೆಪಿ ಜಯ, ವಿಜಯೋತ್ಸವ



ಗಂಗಾವತಿಯಲ್ಲಿ ಬಿಜೆಪಿ ವಿಜಯೋತ್ಸವ ಆಚರಿಸಿದರು.

• **ಕನ್ನಡಪ್ರಭ ವಾರ್ತೆ** ಗಂಗಾವತಿ

ಪಂಚರಾಜ್ಯಗಳಿಗೆ ನಡೆದ ವಿಧಾನಸಭಾ ಸಾರ್ವತ್ರಿಕ ಚುನಾವಣೆಗಳ ಫಲಿತಾಂಶ ಪ್ರಕಟವಾಗಿದ್ದು, ಪುದುಚೇರಿ, ಅಸ್ಸಾಂ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ ಮೂರು ರಾಜ್ಯಗಳಲ್ಲಿ ಬಿಜೆಪಿ ಸರಳ ಬಹುಮತ ಪಡೆದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಗಾಂಧಿ ವೃತ್ತದಲ್ಲಿ ವಿಜಯೋತ್ಸವ ಆಚರಿಸಿದರು. ಫಲಿತಾಂಶ ಬರುತ್ತಿದ್ದಂತೆಯೇ ಕಾರ್ಯಕರ್ತರು ಸಿಡಿಮದ್ದುಗಳನ್ನು ಸಿಡಿಸಿ ಸಿಹಿ ಹಂಚಿದರು. ಈ ವೇಳೆ ಮಾಜಿ ಸಂಸದ ಶಿವರಾಮಗೌಡ, ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ವಿರೂಪಾಕ್ಷಪ್ಪ ಸಿಂಗನಾಳ, ಚಂದ್ರು ಹಿರೂರು, ಡಿ.ಕೆ. ಆಗೋಲಿ, ಮಹಾಲಿಂಗಪ್ಪ ಬನ್ನಿಕೊಪ್ಪ, ಪ್ರಸಾದ್, ಬಸವರಾಜ್, ಕಾಶೀನಾಥ ಚಿತ್ರಗಾರ ಭಾಗವಹಿಸಿದ್ದರು.

ಆರಂಭ... ಸಚಿವ ಶಿವಾನಂದ ಪಾಟೀಲ್ ಹೇಳಿಕೆ, ಕುಕನೂರಲ್ಲಿ ಕೋಲ್ಡ್ ಸ್ಟೋರೇಜ್ ಉದ್ಘಾಟನೆ

ಬಿಜೆಪಿ ಮುಚ್ಚುತ್ತಿದ್ದ ಎಪಿಎಂಸಿಗಳಿಗೆ ಕಾಂಗ್ರೆಸ್‌ನಿಂದ ಜೀವಕಳೆ

• **ಕನ್ನಡಪ್ರಭ ವಾರ್ತೆ** ಕುಕನೂರು

ಈ ಹಿಂದೆ ನಷ್ಟದಲ್ಲಿದ್ದ ಎಪಿಎಂಸಿಗಳನ್ನು ಬಿಜೆಪಿ ಸರ್ಕಾರ ಮುಚ್ಚುತ್ತಿತ್ತು. ಅದನ್ನು ವಿರೋಧಿಸಿ ಕಾಂಗ್ರೆಸ್ ಸರ್ಕಾರ ಎಪಿಎಂಸಿಗಳನ್ನು ಉಳಿಸಿ ರೈತರಿಗೆ ಬೆನ್ನೆಲುಬಾಗಿ ನಿಂತಿತು. ಸದ್ಯ ರಾಜ್ಯದಲ್ಲಿ 36 ಸಾವಿರ ಕೋಟಿ ಕ್ವಿಂಟಲ್ ಆಹಾರ ಪದಾರ್ಥ ಹಾಳಾಗದಂತೆ ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡಲಾಗುತ್ತಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹೇಳಿದರು.

ಪಟ್ಟಣದಲ್ಲಿ ಕೋಲ್ಡ್ ಸ್ಟೋರೇಜ್ ಉದ್ಘಾಟನೆ, ಬಸವೇಶ್ವರ ಮೂರ್ತಿ, ಅಂಬೇಡ್ಕರ್‌ಮೂರ್ತಿ, ಸಂಗೊಳ್ಳಿ ರಾಯಣ್ಣ ಮೂರ್ತಿ ನಿರ್ಮಾಣದ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಎಪಿಎಂಸಿಯಿಂದ 20 ಕೋಲ್ಡ್ ಸ್ಟೋರೇಜ್, ತೋಟಗಾರಿಕೆಯಿಂದ 9 ಕೋಲ್ಡ್ ಸ್ಟೋರೇಜ್ ನಿರ್ಮಾಣ ಈ ವರ್ಷವಾಗುತ್ತಿದೆ. ರಾಜ್ಯದಲ್ಲಿ ವರ್ಷಕ್ಕೆ 36 ಸಾವಿರ ಕೋಟಿ ಕ್ವಿಂಟಲ್ ಆಹಾರ ಪದಾರ್ಥ ಸಂರಕ್ಷಣೆ ಇಲ್ಲದೆ ಹಾಳಾಗುತ್ತಿದೆ. ಇದರಿಂದ ರೈತರಿಗೆ ನಷ್ಟ ಆಗುತ್ತದೆ. ರೈತ ಬೆಳೆದರೂ ಯೋಗ್ಯ ಬೆಲೆ ನೀಡುವ ಕಾನೂನು ಇಲ್ಲ. ಇದು ದುರ್ದೈವ. ಹಾಗಾಗಿ ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡಲಾಗುತ್ತಿದೆ ಎಂದರು.



ಪಟ್ಟಣದಲ್ಲಿ ನಿರ್ಮಾಣವಾದ ಕೋಲ್ಡ್ ಸ್ಟೋರೇಜ್ ಉದ್ಘಾಟನೆ ಜರುಗಿತು.

ಸಂಸದ ರಾಜಶೇಖರ ಹಿಟ್ನಾಳ ಮಾತನಾಡಿ, ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಮಾತನಾಡಿದರು.

ಮುಂಡರಗಿ ಡಾ. ಅನ್ನದಾನೀಶ್ವರ ಶ್ರೀ ಮಾತನಾಡಿ, ಯಲಬುರ್ಗಾ ಎಪಿಎಂಸಿಗೆ ಅನ್ನದಾನೀಶ್ವರ ಹೆಸರಿಡುವುದು ಸೂಕ್ತ. ಇದನ್ನು ಶಾಸಕರು ಪೂರೈಸಬೇಕು ಎಂದರು.

ಡಿಸಿ ಡಾ. ಸುರೇಶ ಇಟ್ನಾಳ್ ಮಾತನಾಡಿ, ಕುಕನೂರಲ್ಲಿ ತಹಸೀಲ್ದಾರ್, ಕೋರ್ಟ್, ಅಂಬೇಡ್ಕರ್‌ಭವನ ನಿರ್ಮಾಣಕ್ಕೆ ಶೀಘ್ರ ಟೆಂಡರ್‌ಪ್ರಕ್ರಿಯೆ ಜರುಗಲಿದೆ ಎಂದರು.

ಎಸ್ಪಿ ಡಾ. ರಾಮ್ ಎಲ್. ಅರಸಿದ್ದಿ ಮಾತನಾಡಿದರು. ಪಟ್ಟಣದ ಹಿರಿಯರಿಗೆ ಬಸವ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ತಹಸೀಲ್ದಾರ್ ಬಸವರಾಜ ಬೆಣ್ಣೆ ಶಿರೂರು, ಡಿವೈಎಸ್ಪಿ ಮುತ್ತಣ್ಣ ಸವರಗೋಳ, ಪಪಂ ಅಧ್ಯಕ್ಷೆಲೀಲಾವತಿ ಮೂಧೋಳ, ಉಪಾಧ್ಯಕ್ಷೆ ಮಂಜುಳಾ ಕಲ್ಮನಿ, ತಾಪಂ ಇಒ ಸಂತೋಷ ಬಿರಾದಾರ, ನೀಲಂ ಹಾಗೂ ಗಣ್ಯರಿದ್ದರು.

ಮೂರ್ತಿ ಪ್ರತಿಷ್ಠಾಪನೆ...

ಅಭಿನವ ಗವಿಸಿದ್ದೇಶ್ವರ ಶ್ರೀಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಗಣ್ಯರ ಮೂರ್ತಿ ಪ್ರತಿಷ್ಠಾಪನೆ ಮಾದರಿ ಕಾರ್ಯ. ಮೂರ್ತಿ ಪ್ರತಿಷ್ಠಾಪನೆ ಜತೆಗೆ ಅವರ ವಿಚಾರಗಳ ಪ್ರತಿಷ್ಠಾಪನೆ ಸಹ ಎದೆಯಲ್ಲಿ ಆಗಬೇಕು ಎಂದರು.

ಬಿಜೆಪಿ ಭರ್ಜರಿ ಗೆಲುವು: ಕುಷ್ಟಗಿಯಲ್ಲಿ ಸಂಭ್ರಮಾಚರಣೆ



ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಅಸ್ಸಾಂ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ಕುಷ್ಟಗಿ ನಗರದ ಮಾರುತಿ ವೃತ್ತದಲ್ಲಿ ಬಿಜೆಪಿ ಯುವ ಮೋರ್ಚಾದ ಕಾರ್ಯಕರ್ತರು ಸಂಭ್ರಮಿಸಿದರು.

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಅಸ್ಸಾಂ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ಕುಷ್ಟಗಿ ನಗರದ ಮಾರುತಿ ವೃತ್ತದಲ್ಲಿ ಬಿಜೆಪಿ ಯುವ ಮೋರ್ಚಾದ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿಹಂಚಿಹಾಗೂಪಕ್ಷದಧ್ವಜಗಳನ್ನುಹಿಡಿದುಜಯಘೋಷಗಳನ್ನು ಕೂಗಿ ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಯುವಮೋರ್ಚಾ ಅಧ್ಯಕ್ಷ ಉಮೇಶ್ ಯಾಧವ, ದೇಶದ ವಿವಿಧ ರಾಜ್ಯಗಳಲ್ಲಿ ಬಿಜೆಪಿ ಮೇಲಿನ ಜನರ ವಿಶ್ವಾಸ ಹೆಚ್ಚುತ್ತಿರುವುದು ಈ ಚುನಾವಣಾ ಫಲಿತಾಂಶಗಳಿಂದ ಸ್ಪಷ್ಟವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಅಭಿವೃದ್ಧಿ ಹಾಗೂ ಜನಪರ ಆಡಳಿತಕ್ಕೆ ಜನರು ಬೆಂಬಲ ನೀಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಪಕ್ಷವನ್ನು ಇನ್ನಷ್ಟು ಬಲಪಡಿಸಲು ಕಾರ್ಯಕರ್ತರು ಶ್ರಮಿಸಬೇಕು ಎಂದು ಕರೆ ನೀಡಿದರು.

ಬಿಜೆಪಿ ಮಂಡಲ ಅಧ್ಯಕ್ಷ ಮಾಂತೇಶ ಬಾದಾಮಿ, ಸಂಗನಗೌಡ ಜೈನರ್, ರಾಜು ಆಚಾರ್‌ಪರಸ್ಪರ, ಈರಣ್ಣ, ಶರಣು ವಡ್ಡಿಗೇರಿ, ಸುಕುಮುನಿ ಗುರುವಿನ, ಬಸವರಾಜ್ ಗುಡುದುರ್, ರಮೇಶ್ ಕೊಳ್ಳಿ, ಸುರೇಶ ಸೇಬನಕಟ್ಟಿ, ದ್ಯಾಮಣ್ಣ ತಳವಾರ, ಚನ್ನಬಸವ ಪರ್ಕಿ ಉಪಸ್ಥಿತರಿದ್ದರು.

IN THE SUPREME COURT OF INDIA EXTRA-ORDINARY APPELLATE JURISDICTION
Petition for Special Leave to Appeal (Civil) No(s) 30025-30028 OF 2024
WITH PRAYER FOR INTERIM RELIEF

HARISH KUMAR (DEAD) BY LRS AND OTHERS ....Petitioner(s)
VERSUS
THE STATE OF KARNATAKA AND OTHERS ....Respondent(s)

To,

